# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು ಉತ್ತರ ಮತ್ತು ಬೆಂಗಳೂರು ದಕ್ಷಿಣ ತಾಲ್ಲೂಕು ಪಂಚಾಯತಿಗಳ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ತೆರವಾದ ಹುದ್ದೆಗಳು ಭರ್ತಿಯಾದ್ದರಿಂದ ವೇತನ ವೆಚ್ಚಕ್ಕಾಗಿ ಹೆಚ್ಚುವರಿ ಅನುದಾನ ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಆರ್ಥಿಕ ಇಲಾಖೆ ವೆಚ್ಚ 5 ಶಾಖೆಯ ಕಡತ ಸಂಖ್ಯೆ: ಆಇ 427 ವೆಚ್ಚ 5/2021 ಇ

**ಪ್ರಸ್ತಾವನೆ:**

ಬೆಂಗಳುರು ನಗರ ಜಿಲ್ಲೆಯ ಬೆಂಗಳೂರು ಉತ್ತರ ಮತ್ತು ಬೆಂಗಳೂರು ದಕ್ಷಿಣ ತಾಲ್ಲೂಕು ಪಂಚಾಯತಿಗಳ ವ್ಯಾಪ್ತಿಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ತೆರವಾಗಿದ್ದ ಅಧಿಕಾರಿ/ಸಿಬ್ಬಂದಿಯವರ ಹುದ್ದೆಗಳು ಭರ್ತಿಯಾದ್ದರಿಂದ ಅನುಕ್ರಮವಾಗಿ ರೂ.5.00ಲಕ್ಷ ಮತ್ತು ರೂ.20.12ಲಕ್ಷ ಒಟ್ಟು ರೂ.25.12ಲಕ್ಷಗಳನ್ನು ಪ್ರಧಾನ ಲೆಕ್ಕ ಶೀರ್ಷಿಕೆ 2210ರಡಿ ಹೆಚ್ಚುವರಿಯಾಗಿ ಬಿಡುಗಡೆಗೊಳಿಸಲು ಪ್ರಸ್ತಾಪಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ತಾಲ್ಲೂಕು ಪಂಚಾಯತ್ ಕಾರ್ಯಕ್ರಮದಡಿಯ ಪ್ರಸ್ತಾಪಿತ ವೇತನ ವೆಚ್ಚಕ್ಕಾಗಿ ರೂ.25.12ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-197-1-10-300 ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 369 ವೆಚ್ಚ 6/2021(ಇ) ದಿನಾಂಕ: 17ನೇ ಜುಲೈ 2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ತಾಲ್ಲೂಕು ಪಂಚಾಯತಿಗೆ ಕಾಲಂ 3 ಕಾರ್ಯಕ್ರಮದಡಿ ವೇತನ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ರೂ.25.12ಲಕ್ಷ(ರೂಪಾಯಿ ಇಪ್ಪತ್ತೈದು ಲಕ್ಷದ ಹನ್ನೆರಡು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ/ತಾಲ್ಲೂಕು ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು/ಕಾರ್ಯನಿರ್ವಾಹಕ ಅಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು).

ಬಿಡುಗಡೆಗೊಳಿಸಿದ ಈ ಅನುದಾನವನ್ನು ಪ್ರಸ್ತಾಪಿತ ವೆಚ್ಚವನ್ನು ಆದ್ಯತೆಯ ಮೇಲೆ ವೆಚ್ಚ ಮಾಡತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ತಾಲ್ಲೂಕು ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

| ಕ್ರ.ಸಂ. | ತಾಲ್ಲೂಕು ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಿದ ಅನುದಾನ |
|---|---|---|---|
| 1 | 2 | 3 | 4 |
| 1 | ಬೆಂಗಳೂರು ಉತ್ತರ | 2210-00-101-0-62-005 | 5.00 |
| 2 | ಬೆಂಗಳೂರು ದಕ್ಷಿಣ | 2210-00-101-0-62-005<br>2210-00-104-0-61-005 | 13.00<br>7.12 |
| | | ಒಟ್ಟು | **25.12** |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಶ್ರೀಕೃಷ್ಣ ಎನ್. ಬುಗಟ್ಯಾಗೋಳ)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು